Suresh Angadi Education Foundation's

# Angadi International School

(Affiliated CBSE, New Delhi)

WORK SHEET

**Grade :VII** **Subject : Kannada**

## ಪ್ರಬಂಧ

## ಸ್ವಚ್ಛ ಭಾರತ ಅಭಿಯಾನ

ಪೀಠಿಕೆ: ನಮ್ಮ ಆರೋಗ್ಯದ ದೃಷ್ಟಿಯಿಂದ ನಾವು ವಾಸಿಸುವ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಈ ದಿಸೆಯಲ್ಲಿ ಪ್ರತಿಯೊಬ್ಬರೂ ಸ್ವಯಂ ಪ್ರೇರಿತರಾಗಿ ಸ್ವಚ್ಛತೆಯ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಇದು ನಮ್ಮ ಮನೆ ಪರಿಸರದಿಂದಲೇ ಪ್ರಾರಂಭಿಸಬೇಕು.

ವಿಷಯ ವಿವರಣೆ: ಇದು ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದೆ. ಮಾನ್ಯ ಪ್ರಧಾನಿಗಳಾದ ನರೇಂದ್ರ ಮೋದಿಯವರು ಗಾಂಧೀಜಿಯವರ 145 ನೇ ಜಯಂತಿಯಂದು 2014 ರ ಅಕ್ಟೋಬರ 2 ರಂದು ತಾವೇ ಕಸ ಗುಡಿಸುವ ಮೂಲಕ ರಾಜಘಾಟ್‌ನಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. 2019 ಅಕ್ಟೋಬರ 2 ರೊಳಗೆ ಭಾರತವನ್ನು ಕಸ ಮುಕ್ತಗೊಳಿಸಲು ನಿರ್ಧರಿಸಲಾಗಿತ್ತು.ನಮ್ಮ ಓಣಿ, ಶಾಲೆ, ಕಛೇರಿ, ಕಟ್ಟಡ, ಊರು, ನಗರ ಮೊದಲಾದವುಗಳನ್ನು ಸ್ವಚ್ಛಗೊಳಿಸುವುದು,ಬಯಲು ಶೌಚ ನಿರ್ಮೂಲನೆ, ಮಲ ಹೊರುವ ಪದ್ಧತಿ ನಿರ್ಮೂಲನೆ, ಶೇ.100 ರಷ್ಟು ತ್ಯಾಜ್ಯ ವಸ್ತುವಿನ ನಿರ್ವಹಣೆ, ಸಂಪೂರ್ಣ ಕೊಳಗೇರಿಗಳ ನಿರ್ಮೂಲನೆ, ಜನರಲ್ಲಿ ನಿರ್ಮಲೀಕರಣಕ್ಕಾಗಿ ಮಾನಸಿಕ ಬದಲಾವಣೆ ಹೀಗೆ ಮೊದಲಾದ ಉದ್ದೇಶಗಳನ್ನು ಇಟ್ಟುಕೊಂಡು ಈ ಅಭಿಯಾನವನ್ನು ಜಾರಿಗೆ ತರಲಾಯಿತು. ಮಾನವನು ತನ್ನ ದೈನಂದಿನ ಚಟುವಟಿಕೆಗಳಲ್ಲಿ ಬಳಸಿ ಬಿಸಾಡುವ ನಿರುಪಯುಕ್ತ ವಸ್ತುಗಳೇ ತ್ಯಾಜ್ಯ ವಸ್ತುಗಳು.ಇವುಗಳಲ್ಲಿ ಮೂರು ವಿಧ. ಘನತ್ಯಾಜ್ಯ ವಸ್ತುಗಳು, ದ್ರವ ತ್ಯಾಜ್ಯವಸ್ತುಗಳು, ಮತ್ತು ಅನಿಲ ತ್ಯಾಜ್ಯ ವಸ್ತುಗಳು. ಇವುಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡದಿದ್ದರೆ ಪರಿಸರ ನಾಶವಾಗುತ್ತದೆ. ಮೊದಲ ಹಂತದಲ್ಲಿ ಮನೆ,ಕಛೇರಿ ಹಾಗೂ ಸುತ್ತಮುತ್ತಲಿನ ಪರಿಸರದಲ್ಲಿರುವ ತ್ಯಾಜ್ಯಗಳನ್ನು ಸಂಗ್ರಹಿಸಲು, ವೈಜ್ಞಾನಿಕ ರೀತಿಯಲ್ಲಿ ವಿಂಗಡಿಸಲು ಸೂಕ್ತವಾದ ವ್ಯವಸ್ಥೆ ಮಾಡಿಕೊಳ್ಳಬೇಕು. ಮರುಬಳಕೆಗೆ ಯೋಗ್ಯವಾದ ತ್ಯಾಜ್ಯವಸ್ತುಗಳನ್ನು ಮರುಬಳಕೆಗೂ, ಮರುಬಳಕೆ ಮಾಡಲಾಗದ ತ್ಯಾಜ್ಯ ವಸ್ತುಗಳನ್ನು ವೈಜ್ಞಾನಿಕ ರೀತಿಯಲ್ಲಿ ದಹಿಸಬೇಕು ಅಥವಾ ಭೂಮಿಯಲ್ಲಿ ಹೂಳಬೇಕು.

ಉಪಸಂಹಾರ: ತ್ಯಾಜ್ಯವಸ್ತುಗಳ ನಿರ್ವಹಣೆ ಮಾಡುವ ಕಾರ್ಯದಲ್ಲಿ ವಿದ್ಯಾರ್ಥಿ ತಮ್ಮನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಕಾಂಪೋಸ್ಟ ತಯಾರಿಕೆ, ರಿಸೈಕಲಿಂಗ್ ಮಾಡುವುದನ್ನು ಹವ್ಯಾಸ ಮಾಡಿಕೊಂಡರೆ ಸ್ವಚ್ಛಭಾರತ ಅಭಿಯಾನಕ್ಕೆ ಅಲ್ಪ ಕಾಣಿಕೆ ನೀಡಿದಂತಾಗುತ್ತದೆ.